ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2321
ಮಾನ್ಯ ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	21.03.2022
ಉತ್ತರಿಸುವ ಸಚಿವರು	:	ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು;	ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಒಟ್ಟಾರೆ 81 ಪ್ರಾಂಶುಪಾಲರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 15 ಹುದ್ದೆಗಳು ಭರ್ತಿಯಾಗಿದ್ದು, ಉಳಿದಂತೆ 66 ಹುದ್ದೆಗಳು ಖಾಲಿ ಇರುತ್ತವೆ.
(ಆ)	ಸದರಿ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡದಿರಲು ಕಾರಣಗಳೇನು;	ಪ್ರಸ್ತುತ ಜಾರಿಯಲ್ಲಿರುವ 2006ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪ್ರಾಂಶುಪಾಲರು ಗ್ರೇಡ್-1 ಮತ್ತು ಪ್ರಾಂಶುಪಾಲರು ಗ್ರೇಡ್-2 ಹುದ್ದೆಗಳು ಇರುತ್ತವೆ. ಎಐಸಿಟಿಇಯ ಅಧಿಸೂಚನೆ ಸಂಖ್ಯೆ:37-3//2010, ದಿನಾಂಕ:05.03.2010ರಲ್ಲಿ ಹೊರಡಿಸಲಾಗಿರುವ "Pay Scale service conditions Scale, Service conditions and Qualifications for the Teachers and Academic Staff in Technical Institutions (Diploma) Regulation, 2010" ರಂತೆ ಸರ್ಕಾರದ ಆದೇಶ ಸಂಖ್ಯೆ:ಇಡಿ 118 ಡಿಟಿಇ 2010, ದಿನಾಂಕ:31.03.2011ರಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಹಾಗೂ ಅನುದಾನಿತ ಬೋಧಕ ವರ್ಗದವರಿಗೆ ಎಐಸಿಟಿಇಯ 6ನೇ ವೇತನ ಶ್ರೇಣಿಗಳನ್ನು ದಿನಾಂಕ:01.04.2011 ರಿಂದ ಜಾರಿಗೊಳಿಸಲಾಗಿದ್ದು, ಸದರಿ ಸರ್ಕಾರದ ಆದೇಶದಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿನ ಪ್ರಾಂಶುಪಾಲರು ಗ್ರೇಡ್-1 ಹಾಗೂ

		ಪ್ರಾಂಶುಪಾಲರು ಗ್ರೇಡ್–2 ಹುದ್ದೆಗಳನ್ನು ವಿಲೀನಗೊಳಿಸಿ "ಪ್ರಾಂಶುಪಾಲರು" ಎಂದು ಮರುಪ ನಾಮಿಕರಿಸಲಾಗಿರುತ್ತದೆ. ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯ ಕುರಿತಂತೆ ಸಿ.ಆ.ಸು (ಸೇವಾ ನಿಯಮಗಳು) ಇಲಾಖೆಯ ಅಭಿಪ್ರಾಯ ಪಡೆಯಲಾಗಿರುತ್ತದೆ. ಅದರನ್ವಯ ಸರ್ಕಾರದ ಪತ್ರ ಸಂಖ್ಯೆ:ಇಡಿ 059 ಡಿಟಿಇ 2018, ದಿನಾಂಕ:18.09.2018 ರಲ್ಲಿ, ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧವಾಗಿ ಪಾಲಿಟೆಕ್ನಿಕ್ ಕಾಲೇಜುಗಳ ಬೋಧಕ ವೃಂದಗಳಿಗೆ ಎ.ಐ.ಸಿ.ಟಿ.ಇ ಮಾರ್ಗಸೂಚಿಗಳನ್ವಯ ಕನಿಷ್ಠ ವಿದ್ಯಾರ್ಹತೆ ಹಾಗೂ ನೇಮಕಾತಿ ವಿಧಾನವನ್ನು ಅಳವಡಿಸಿಕೊಂಡು 2006ರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಲು ಕ್ರಮವಹಿಸುವಂತೆ ತಾಂತ್ರಿಕ ಶಿಕ್ಷಣ ಇಲಾಖೆ ತಿಳಿಸಲಾಗಿದೆ. ಅದರಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ 2006ರ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತಂದು ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಬೇಕಾಗಿರುತ್ತದೆ.
(ಇ)	ಖಾಯಂ ಪ್ರಾಂಶುಪಾಲರು ಇಲ್ಲದಿರುವುದರಿಂದ ಕಾಲೇಜಿನ ಶೈಕ್ಷಣಿಕ ಚಟುವಟಿಕೆಗಳಿಗೆ ತುಂಬಾ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ಕಾರ್ಯಭಾರವನ್ನು ಸಂಸ್ಥೆಯ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಆಯಾ ಸಂಸ್ಥೆಗಳಲ್ಲಿನ ಹಿರಿಯ ಉಪನ್ಯಾಸಕರುಗಳಿಗೆ ತಾತ್ಕಾಲಿಕವಾಗಿ ನಿರ್ವಹಿಸಲು ಸೂಚಿಸಲಾಗಿರುತ್ತದೆ.
(ಈ)	ಯಾವ ಕಾಲಮಿತಿಯಲ್ಲಿ ಸದರಿ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲಾಗುವುದು.	ಚಾಲ್ತಿಯಲ್ಲಿರುವ ತಾಂತ್ರಿಕ ಶಿಕ್ಷಣ ಇಲಾಖೆಯ 2006ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಪ್ರಕ್ರಿಯೆಯು ಚಾಲನೆಯಲ್ಲಿದ್ದು, ಈ ಸಂಬಂಧ ನೂತನ ಕರಡು ವೃಂದ ಮತ್ತು ನೇಮಕಾತಿ ನಿಯಮಗಳ ಕರಡು ಅಧಿಸೂಚನೆಯನ್ನೊಳಗೊಂಡ ಪ್ರಸ್ತಾವನೆಯನ್ನು ಆಯುಕ್ತಾಲಯದಿಂದ ದಿನಾಂಕ:18.02.2022 ರಂದು ಸ್ವೀಕರಿಸಲಾಗಿದ್ದು,

		ನಿಯಮಾನುಸಾರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಿ ಕಾರ್ಯಗತಗೊಳಿಸಿದ ಕೂಡಲೇ ಪ್ರಾಂಶುಪಾಲರ ಹುದ್ದೆಯನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುವುದು.
(ಉ)	ಸದರಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಬೋಧಕರಿಗೆ ಕಾಲಕಾಲಕ್ಕೆ ಎ.ಜಿ.ಪಿ ನೀಡದಿರಲು ಕಾರಣಗಳೇನು;	ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ:10.11.2020ರಲ್ಲಿ ಸರ್ಕಾರಿ/ ಅನುದಾನಿತ ಪಾಲಿಟೆಕ್ನಿಕ್‌ಗಳ ಬೋಧಕ ಸಿಬ್ಬಂದಿಗಳಿಗೆ ಎಐಸಿಟಿಇ ರೆಗ್ಯೂಲೇಷನ್ 2012ರ API ಆಧಾರಿತ ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯನ್ನು ಅನುಷ್ಠಾನಗೊಳಿಸಿ ಆದೇಶಿಸಿದೆ. ಸದರಿ ಆದೇಶದಲ್ಲಿ ವೃತ್ತಿ ಪದೋನ್ನತಿ ಮಂಜೂರಾತಿ ಕುರಿತಂತೆ ಎಐಸಿಟಿಇ ರೆಗ್ಯೂಲೇಷನ್ 2010 ಮತ್ತು 2012ರಲ್ಲಿ ವಿಧಿಸಿರುವ ವಿದ್ಯಾರ್ಹತೆ ಸೇವಾ ಷರತ್ತುಗಳು ಹಾಗೂ ಇತರೆ ಎಲ್ಲಾ ಅರ್ಹತಾ ಮಾನದಂಡ/ ನಿಬಂಧನೆಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಲು ತಿಳಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ಎಐಸಿಟಿಇ ನಿಯಮಾವಳಿಗಳಂತೆ ರಚಿಸಲಾದ ತಜ್ಞರ ಸಮಿತಿ ಅಂದರೆ Screening cum Evaluation ಸಮಿತಿಯು ಎಐಸಿಟಿಇ ನಿಯಮಾವಳಿಗಳು / ಮಾನದಂಡಗಳಂತೆ ಪರಿಶೀಲಿಸಿ ಶಿಫಾರಸ್ಸು ಮಾಡಿದ ನಂತರ ಸರ್ಕಾರದ ಪೂರ್ವಾನುಮೋದನೆ ಪಡೆದು ಕೆರಿಯರ್ ಅಡ್ವಾನ್ಸ್‌ಮೆಂಟ್ ಯೋಜನೆಯ ಸೌಲಭ್ಯಗಳನ್ನು ಮಂಜೂರು ಮಾಡತಕ್ಕದ್ದು ಎಂದು ತಿಳಿಸಲಾಗಿರುತ್ತದೆ. ಏತನ್ಮಧ್ಯೆ, ಎಂ.ಇ.ಐ. ಪಾಲಿಟೆಕ್ನಿಕ್ (ಅನುದಾನಿತ), ಬೆಂಗಳೂರು ಇಲ್ಲಿನ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಎಂ. ಗೋಪಾಲ್, ಆಯ್ಕೆ ಶ್ರೇಣಿ ಉಪನ್ಯಾಸಕರು, ಸಿವಿಲ್ ವಿಭಾಗ ಮತ್ತು ಇತರರು ಸೇರಿದಂತೆ 09 ಅರ್ಜಿದಾರರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:8484/2020 (S-RES) ದಾಖಲಿಸಿದ್ದು, ಮಾನ್ಯ ನ್ಯಾಯಾಲಯವು ದಿನಾಂಕ:04-12-2020 ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಪಾಲಿಟೆಕ್ನಿಕ್ ಬೋಧಕ ಸಿಬ್ಬಂದಿಗಳಿಗೆ CAS
(ಊ)	ನಿಗದಿತ ಸಮಯದಲ್ಲಿ ಅರ್ಹರಿಗೆ ಎ.ಜಿ.ಪಿ ನೀಡಲು ಯಾವ ಕ್ರಮ ಕೈಗೊಳ್ಳಲಾಗುವುದು?	

		ಅಡಿಯಲ್ಲಿ ಸೌಲಭ್ಯಗಳನ್ನು ಮಂಜೂರು ಮಾಡಲು ನಿಯಮಗಳನ್ನು ರೂಪಿಸಿರುವ 2012ರ ಎಐಸಿಟಿಇ C... ರೆಗ್ಯುಲೇಷನ್ ಅನ್ನು ಅನುಷ್ಠಾನಗೊಳಿಸಿದ ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ:10.11.2020ಕ್ಕೆ ತಡೆಯಾಜ್ಞೆ ನೀಡಿರುತ್ತದೆ. ಈ ಹಿನ್ನೆಲೆಯಲ್ಲಿ, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ CAS ಅಡಿಯಲ್ಲಿ ವೃತ್ತಿ ಪದೋನ್ನತಿ ಸೌಲಭ್ಯವನ್ನು ನೀಡಲು ಸಾಧ್ಯವಾಗಿರುವುದಿಲ್ಲ. ಪ್ರಸ್ತುತ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿ:06.12.2021 ರಂದು ಅಂತಿಮ ತೀರ್ಪು ನೀಡಿರುತ್ತದೆ. ಮಾನ್ಯ ನ್ಯಾಯಾಲಯದ ತೀರ್ಪನ್ನು ಪರಿಶೀಲಿಸಿ, ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು. ಮುಂದುವರೆದು, 2012ರಲ್ಲಿನ ರೆಗ್ಯುಲೇಷನ್ ಅಳವಡಿಸಿಕೊಳ್ಳುವ ಸಂಬಂಧ ಕೆಲವು ಗೊಂದಲಗಳಿರುವುದರಿಂದ ಈ ಬಗ್ಗೆ ಸ್ಪಷ್ಟೀಕರಣ ಕೋರಿ ತಾಂತ್ರಿಕ ಶಿಕ್ಷಣ ಇಲಾಖೆಯ ವತಿಯಿಂದ ಎಐಸಿಟಿಇ, ನವದೆಹಲಿ ಇವರಿಗೆ ದಿನಾಂಕ:24.02.2022ರಂದು ಪತ್ರ ಬರೆದಿದ್ದು ಅದರಂತೆ, ಎಐಸಿಟಿಇ, ನವದೆಹಲಿ ಇವರಿಂದ ಸ್ಪಷ್ಟೀಕರಣ ಬಂದ ನಂತರ ವೃತ್ತಿ ಪದೋನ್ನತಿ ಸೌಲಭ್ಯವನ್ನು ನೀಡಲು ನಿಯಮಾನುಸಾರ ಕ್ರಮವಹಿಸಲಾಗುವುದು.

ಇಡಿ 30 ಟಿಪಿಇ 2022

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)

ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,

ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ

ಹಾಗೂ ಜೀವನೋಪಾಯ ಇಲಾಖೆ ಸಚಿವರು